**ಕರ್ನಾಟಕ ವಿಧಾನ ಪರಿಷತ್**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 73 (90) |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 27.01.2026 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು. |

| | ಪ್ರಶ್ನೆ | ಉತ್ತರ |
|---|---|---|
| ಅ) | ಮಹಾನಗರ ಪಾಲಿಕೆಯಲ್ಲಿ ಖಾತೆ ಬದಲಾವಣೆ ಮಾಡಿಕೊಡಲು ಸರ್ಕಾರ ಯಾವ ಮಾನದಂಡಗಳ ಮೇಲೆ ಶುಲ್ಕ ನಿಗದಿ ಮಾಡಿದೆ'; | ಮಹಾನಗರ ಪಾಲಿಕೆಯಲ್ಲಿ ಖಾತೆ ಬದಲಾವಣೆ ಮಾಡಿಕೊಡಲು ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: ಪೌನಿ/ಎಸ್ ಎಎಸ್ /35/2005-06 ದಿನಾಂಕ: 30-01-2006ರಲ್ಲಿನ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದನ್ವಯ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಮಂಡಿಸಿ, ಸಭೆಯ ನಿರ್ಣಯದಂತೆ ಶುಲ್ಕವನ್ನು ನಿಗಧಿಪಡಿಸಲಾಗುತ್ತದೆ. |
| ಆ) | 2024-25ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಖಾತೆ ಬದಲಾವಣೆಗೆ ಸ್ವೀಕರಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; ಮತ್ತು ವಸೂಲಾತಿ ಆಗಿರುವ ಶುಲ್ಕ ಎಷ್ಟು; | 2024-25 ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು ಸಂಖ್ಯೆ:11440 ಖಾತಾ ಬದಲಾವಣೆ ಅರ್ಜಿಗಳನ್ನು ಸ್ವೀಕರಿಸಲಾಗಿರುತ್ತದೆ ಮತ್ತು ವಸೂಲಾತಿ ಆಗಿರುವ ಶುಲ್ಕ ರೂ. 533.34 ಲಕ್ಷಗಳು. |
| ಇ) | 2024-25 ಮತ್ತು 2025-26ನೇ ಸಾಲಿನಲ್ಲಿ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಎಷ್ಟು ಅರ್ಜಿಗಳನ್ನು ಮುಕ್ತಾಯಗೊಳಿಸಲಾಗಿದೆ ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; | 2024-25 ಮತ್ತು 2025-26 ನೇ ಸಾಲಿನಲ್ಲಿ ಸ್ವೀಕರಿಸಿದ ಮುಕ್ತಾಯಗೊಳಿಸಿದ ಮತ್ತು ಬಾಕಿ ಇರುವ ಅರ್ಜಿಗಳ ವಿವರ ಈ ಕೆಳಗಿನಂತಿರುತ್ತದೆ. (ಕೋಷ್ಟಕ ಕೆಳಗೆ) |
| ಈ) | ನಿಗದಿತ ಅವಧಿಯೊಳಗೆ ಅರ್ಜಿಗಳನ್ನು ಮುಕ್ತಾಯಗೊಳಿಸದಿರಲು ಕಾರಣವೇನು: ಈ ಸಂಬಂಧ ಅಧಿಕಾರಿ / ನೌಕರರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ? | ಆಸ್ತಿ ತೆರಿಗೆ ಪಾವತಿ ವರ್ಗಾವಣೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಅರ್ಜಿದಾರರು ಮಾಲೀಕತ್ವ ಸಾಬೀತುಪಡಿಸುವ ದಾಖಲೆಗಳನ್ನು ಹಾಜರುಪಡಿಸದೇ ಇರುವುದರಿಂದ ಹಾಗೂ ಬಾಕಿ ಆಸ್ತಿ ತೆರಿಗೆ ಪಾವತಿಸದೇ ಇರುವುದರಿಂದ ಮತ್ತು ಆಸ್ತಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿರುವಂತಹ ಪ್ರಕರಣಗಳು ಮಾತ್ರ ಬಾಕಿ ಉಳಿದಿರುತ್ತವೆ. |

| ಮನಪಾ /ಜಿಲ್ಲೆ | 2024-25 ನೇ ಸಾಲಿನಲ್ಲಿ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ: | 2025-26ನೇ ಸಾಲಿನಲ್ಲಿ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ: | 2024-25 ನೇ ಸಾಲಿನಲ್ಲಿ ಮುಕ್ತಾಯ ಗೊಳಿಸಲಾಗಿರುವ ಅರ್ಜಿಗಳ ಸಂಖ್ಯೆ: | 2025-26ನೇ ಸಾಲಿನಲ್ಲಿ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ: |
|---|---|---|---|---|
| ಶಿವಮೊಗ್ಗ ಮನಪಾ | 6213 | 6456 | 12241 | 428 |
| ಶಿವಮೊಗ್ಗ ಜಿಲ್ಲೆ | 5227 | 4697 | 9502 | 422 |
| **ಒಟ್ಟು** | **11440** | **11153** | **21743** | **850** |

**ಸಂಖ್ಯೆ: ನಅಇ 38 ಎಂಎನ್ಇ 2026 (ಇ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನಾ
ಸಚಿವರು